ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಇಂಜಿನಿಯರಿಂಗ್ ವಿಭಾಗಕ್ಕೆ ವಾಹನಗಳನ್ನು ನೀಡುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 74 (421)
ಸದಸ್ಯರ ಹೆಸರು : ಶ್ರೀ ಹಾಲಪ್ಪ.ಹೆಚ್. (ಸೊರಬ)
ಉತ್ತರಿಸುವ ಸಚಿವರು : ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಪ್ರಶ್ನೆಗಳು:

ಅ) ಸೊರಬ ತಾಲ್ಲೂಕು ಪಂಚಾಯತ್ AE ಯವರ ಮತ್ತು EO ರವರ ಸರ್ಕಾರಿ ವಾಹನಗಳು ತುಂಬಾ ಹಳೆಯದಾಗಿ ಹಾಳಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅಂದಿನ ಮುಖ್ಯಮಂತ್ರಿಗಳು KDP ಸಭೆಯಲ್ಲಿ ಕೂಡಲೇ ವಾಹನ ಒದಗಿಸುವ ಭರವಸೆ ನೀಡಿದ್ದು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;

ಇ) ರಾಜ್ಯದ ಬಹುತೇಕ ತಾಲ್ಲೂಕು ಮಟ್ಟದ ಪಂಚಾಯತ್ ರಾಜ್ ವ್ಯವಸ್ಥೆಯ ಅಧಿಕಾರಿಗಳ ವಾಹನಗಳು ಇದೇ ಸ್ಥಿತಿಯಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದರೆ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಉತ್ತರಗಳು:

ಅ) ಬಂದಿದೆ.

ಆ) ಜಿಲ್ಲಾ ಪಂಚಾಯತ್, ಶಿವಮೊಗ್ಗ ಮತ್ತು ಅಧೀನ ಕಚೇರಿಗಳಿಗೆ ಉಪಯೋಗಕ್ಕಾಗಿ ಪ್ರಸ್ತುತ ಸಾಲಿನಲ್ಲಿ 3 ವಾಹನಗಳನ್ನು ಖರೀದಿಸಲು ಸರ್ಕಾರದ ಅನುಮೋದನೆ ನೀಡಿದೆ.

ಇ) ಬಂದಿದೆ.

ಈ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧಿಕೃತ ಜ್ಞಾಪನ ದಿನಾಂಕ 12.05.2008ರಲ್ಲಿ ಆರ್ಥಿಕ ಮಿತಿಯನ್ನು ಪರಿಷ್ಕರಿಸಿ

ಅನುದಾನದ ಲಭ್ಯತೆಗನುಗುಣವಾಗಿ ರೂ. 5.00 ಲಕ್ಷಗಳಿಗೆ ಹೊಸ ವಾಹನ ಖರೀದಿಸಲು ನಿಗದಿಪಡಿಸಿದೆ. ಅದರಂತೆ ಇಲಾಖಾ ಮುಖ್ಯಸ್ಥರು ಕ್ರಮ ಕೈಗೊಳ್ಳುವರು.

ರಾಜ್ಯಾದ್ಯಂತ ಕುಡಿಯುವ ನೀರಿನ ಅಭಾವ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 75 (446)

ಸದಸ್ಯರ ಹೆಸರು : ಶ್ರೀ ಖಾದರ್.ಯು.ಟಿ (ಮಂಗಳೂರು)

ಉತ್ತರಿಸುವ ಸಚಿವರು : ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಪ್ರಶ್ನೆಗಳು:

ಅ) ರಾಜ್ಯಾದ್ಯಂತ ಕುಡಿಯುವ ನೀರಿಗೆ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕುಡಿಯುವ ನೀರಿನ ಸರಬರಾಜಿಗೆ ಹಣದ ಕೊರತೆ ಇರುವುದು ನಿಜವೇ;

ಇ) ಕುಡಿಯುವ ನೀರಿನ ಅಭಾವ ಪರಿಹಾರಕ್ಕಾಗಿ ಸರ್ಕಾರ ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು (ವಿಧಾನಸಭಾ ಕ್ಷೇತ್ರವಾರು ವಿವರ ಒದಗಿಸುವುದು);

ಈ) ಶಾಸಕರ ಅಧ್ಯಕ್ಷತೆಯ ಟಾಸ್ಕ್‌ಫೋರ್ಸ್ ಕಮಿಟಿಗಳಿಗೆ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರಕ್ಕೆ ಇರುವ ತೊಂದರೆಯೇನು?

ಉತ್ತರಗಳು:

ಅ) ಬರಪೀಡಿತ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಅಭಾವ ತಲೆದೋರಿದೆ.

ಆ) ಅನುಮೋದಿತ ಕುಡಿಯುವ ನೀರಿನ ಕ್ರಿಯಾ ಯೋಜನೆಗೆ ಹಣದ